## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸುವರ್ಣ ಗ್ರಾಮೋದಯ ಯೋಜನೆ ಲೆಕ್ಕ ಶೀರ್ಷಿಕೆ-4215-02-800-0-02-132 (ಯೋಜನೆ) ಅಡಿ ಮೈಸೂರು ಜಿಲ್ಲೆ ನಂಜನಗೂಡು ವಿಧಾನ ಸಭಾ ಕ್ಷೇತ್ರದ ಚಿನ್ನದಗುಡಿ ಹುಂಡಿ ಗ್ರಾಮಕ್ಕೆ ರೂ.70.00 ಲಕ್ಷಗಳ ಅನುದಾನದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: 1.ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷರು, ಚಿನ್ನದಗುಡಿ ಹುಂಡಿ ಗ್ರಾಮ, ಮೈಸೂರು ಜಿಲ್ಲೆ ಇವರು ಸರ್ಕಾರಕ್ಕೆ ಸಲ್ಲಿಸಿದ ಮನವಿ ದಿ:20.07.2016.

2.ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂ:ಗ್ರಾಅಪ:466:ಪಿಬಿಎಸ್:2016. ದಿ:23.08.2016.

**ಪ್ರಸ್ತಾವನೆ:**

ಗ್ರಾಮ ವಿಕಾಸ ಯೋಜನೆಯಡಿ ಮೈಸೂರು ಜಿಲ್ಲೆ ನಂಜನಗೂಡು ವಿಧಾನ ಸಭಾ ಕ್ಷೇತ್ರದ ಚಿನ್ನದಗುಡಿ ಹುಂಡಿ ಗ್ರಾಮವು ಆಯ್ಕೆಯಾಗಿದ್ದು, ಅಭಿವೃದ್ಧಿ ಪಡಿಸಲು ತಲಾನುದಾನದಂತೆ ರೂ.90.82 ಲಕ್ಷಗಳನ್ನು ನಿಗಧಿಪಡಿಸಿ ಆದೇಶಿಸಲಾಗಿತ್ತು. ಸುವರ್ಣ ಗ್ರಾಮೋದಯ ಯೋಜನೆ ಲೆಕ್ಕ ಶೀರ್ಷಿಕೆ-4215-02-800-0-02-132 (ಯೋಜನೆ) ಅಡಿ ಲಭ್ಯವಿರುವ ಅನುದಾನದಲ್ಲಿ ಮೈಸೂರು ಜಿಲ್ಲೆ ನಂಜನಗೂಡು ವಿಧಾನ ಸಭಾ ಕ್ಷೇತ್ರದ ಚಿನ್ನದಗುಡಿ ಹುಂಡಿ ಗ್ರಾಮಕ್ಕೆ ರೂ.70.00 ಲಕ್ಷಗಳ ಹೆಚ್ಚುವರಿ ಅನುದಾನದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಉಲ್ಲೇಖ (1) ರ ಪ್ರಸ್ತಾವನೆಯನ್ನು ಸರ್ಕಾರ ಪರಿಶೀಲಿಸಿದೆ ಮತ್ತು

ಮೈಸೂರು ಜಿಲ್ಲೆ ನಂಜನಗೂಡು ವಿಧಾನ ಸಭಾ ಕ್ಷೇತ್ರದ ಚಿನ್ನದಗುಡಿ ಹುಂಡಿ ಗ್ರಾಮದ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ : 25 : ಗ್ರಾವಿಯೋ : 2015, ಬೆಂಗಳೂರು, ದಿನಾಂಕ: 29.08.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಮೈಸೂರು ಜಿಲ್ಲೆ ನಂಜನಗೂಡು ವಿಧಾನ ಸಭಾ ಕ್ಷೇತ್ರದ ಚಿನ್ನದಗುಡಿ ಹುಂಡಿ ಗ್ರಾಮದ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಲಭ್ಯವಿರುವ ಸುವರ್ಣ ಗ್ರಾಮೋದಯ ಯೋಜನೆ ಲೆಕ್ಕ ಶೀರ್ಷಿಕೆ-4215-02-800-0-02-132 (ಯೋಜನೆ) ಅಡಿ **ರೂ.70.00 ಲಕ್ಷ** (ರೂಪಾಯಿಗಳು ಎಪ್ಪತ್ತು ಲಕ್ಷಗಳು ಮಾತ್ರ) ಹೆಚ್ಚುವರಿ ಅನುದಾನದಲ್ಲಿ ಪ್ರಸ್ತಾವಿತ ಮೈಸೂರು ಜಿಲ್ಲೆ ನಂಜನಗೂಡು ವಿಧಾನ ಸಭಾ ಕ್ಷೇತ್ರದ ಚಿನ್ನದಗುಡಿ ಹುಂಡಿ ಗ್ರಾಮದ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

ಈ ಆದೇಶವನ್ನು ಗ್ರಾ ಮತ್ತು ಪಂ.ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಉಲ್ಲೇಖ (2) ರ ಟಿಪ್ಪಣಿ ಸಂಖ್ಯೆ: ಗ್ರಾಅಪ: 466: ಪಿಬಿಎಸ್:2016. ದಿ:23.08.2016ರ ಸಹಮತಿಯಂತೆ ಹೊರಡಿಸಲಾಗಿದೆ.

**ಷರತ್ತುಗಳು:**

1. ಮೈಸೂರು ಜಿಲ್ಲೆ ನಂಜನಗೂಡು ವಿಧಾನ ಸಭಾ ಕ್ಷೇತ್ರದ ಚಿನ್ನದಗುಡಿ ಹುಂಡಿ ಗ್ರಾಮದ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಅಗತ್ಯತೆ ಆಧಾರದ ಮೇರೆಗೆ ಹಂಚಿಕೆ ಮಿತಿಗೊಳಪಟ್ಟು ಪಂ.ರಾಜ್ ಇಂಜಿನಿಯರಿಂಗ್ ವಿಭಾಗದಿಂದ ಅನುಷ್ಠಾನಗೊಳಿಸತಕ್ಕದ್ದು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರು ಎಲ್ಲಾ ಅನುಮೋದಿತ ಕಾಮಗಾರಿಗೆ ಸಂಬಂಧಿಸಿದಂತೆ ಅನುಷ್ಠಾನದ ಜವಾಬ್ದಾರಿಯನ್ನು ನಿರ್ವಹಿಸುವುದು ಹಾಗೂ ಕಾರ್ಯಪಾಲಕ ಅಭಿಯಂತರರಿಂದ ಪ್ರಗತಿಯ ವರದಿಯನ್ನು ಪಡೆದು ಸರ್ಕಾರಕ್ಕೆ ಕಾಲಕಾಲಕ್ಕೆ ನೀಡತಕ್ಕದ್ದು.

3. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯನ್ನು ಜಿಲ್ಲಾ ಪಂಚಾಯತಿ/ಕೆಆರ್‌ಐಡಿಎಲ್, ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ ಲೆಕ್ಕ ಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆ ಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿಕೊಳ್ಳತಕ್ಕದ್ದು.
4. ಈ ಯೋಜನೆಯಡಿಯ ಎಲ್ಲಾ ಕಾಮಗಾರಿಗಳ ಬಳಕೆಯಾದ ಹಣ ಕುರಿತಂತೆ ಮಾಹಿತಿಯನ್ನು ಸರ್ಕಾರಕ್ಕೆ ಹಾಗೂ ಮುಖ್ಯ ಇಂಜನಿಯರ್, ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆಗೆ ನೀಡುವುದು
5. ಕಾಮಗಾರಿ ಪ್ರಾರಂಭಿಸುವ ಮುನ್ನ ಮತ್ತು ಮುಕ್ತಾಯದ ನಂತರ ಮೂಲಭೂತ ಸೌಕರ್ಯ ಕಾಮಗಾರಿಗಳ ಸನ್ನಿವೇಶದ ಛಾಯಾ ಚಿತ್ರಗಳನ್ನು ತೆಗೆದು ವೆಬ್‌ಸೈಟ್ ನಲ್ಲಿ ಅಳವಡಿಸತಕ್ಕದ್ದು.
6. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ಹೆಚ್ಚುವರಿ ರಸ್ತೆ ಕಾಮಗಾರಿಗಳನ್ನು Worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು Worksoft website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.
7. ಕಾಮಗಾರಿಗಳನ್ನು 3rd party / SQM / DQM ರವರಿಂದ ತಪಾಸಣೆಗೆ ಒಳಪಡಿಸತಕ್ಕದ್ದು.
8. 2014-15ನೇ ಸಾಲಿನಿಂದ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಅದರಂತೆ, ಪ್ರಸ್ತುತ ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವ ನಿಬಂಧನೆಗೊಳಪಡಿಸಿದೆ.
9. ಈ ಆದೇಶದಂತೆ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿದ ಕಾಮಗಾರಿಗಳಿಗೆ ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜನಿಯರ್, ಪಂ.ರಾಜ್ ಇಂಜನಿಯರಿಂಗ್ ಇಲಾಖೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ರವರ ಮುಖಾಂತರ ಸರ್ಕಾರಕ್ಕೆ ನೀಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು.

9. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
11. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
12. ಜಿಲ್ಲಾ ಖಜಾನಾಧಿಕಾರಿಗಳು, ಮೈಸೂರು ಜಿಲ್ಲೆ.
13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
15. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು
16. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಮೈಸೂರು
17. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮೈಸೂರು
18. ಮುಖ್ಯಸ್ಥರು ಗಣಕ ಕೋಶ, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು
19. ರಕ್ಷಾ ಕಡತ / ಹೆಚ್ಚುವರಿ ಪ್ರತಿ.